ಜಿಲ್ಲಾ ಪರಿಷತ್ತು ಮತ್ತು ಮಂಡಲ ಪಂಚಾಯ್ತಿ ಚುನಾವಣೆ

665 - ಶ್ರೀ ಬಿ.ಹೆಚ್. ಬನ್ನಿಕೋಡ್ (ಹಿರೇಕೆರೂರು) : ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಸರ್ವೋಚ್ಚ ನ್ಯಾಯಾಲಯದ ಆದೇಶದ ರೀತ್ಯಾ ನಿಗದಿತ ವೇಳೆಯಲ್ಲಿ ಜಿಲ್ಲಾ ಪರಿಷತ್ ಮತ್ತು ಮಂಡಲ ಪಂಚಾಯ್ತಿಗಳಿಗೆ ಚುನಾವಣೆ ನಡೆಸಲು ಸರ್ಕಾರವು ಉದ್ದೇಶಿಸಿದೆಯೆ?

ಆ) ಈ ಬಗ್ಗೆ ಯಾವುದಾದರೂ ಕ್ರಮವನ್ನು ಸರ್ಕಾರವು ಕೈಗೊಂಡಿದೆಯೇ?

ಇ) ಜಿಲ್ಲಾ ಪರಿಷತ್ತುಗಳ ಮತ ಕ್ಷೇತ್ರವನ್ನು ಈಗ ಇದ್ದಂತೆಯೆ ಮುಂದುವರೆಸಲಾಗುವುದೋ ಅಥವಾ ಪುನರ್ ವಿಗಂಡನೆ ಮಾಡಲು ಕ್ರಮ ಕೈಗೊಳ್ಳಲಾಗುವುದೋ?

ಈ) ಮಂಡಲ ಪಂಚಾಯತ್‌ಗಳ ಮತಕ್ಷೇತ್ರಗಳನ್ನು ಪುನರ್ ವಿಂಗಡನೆ ಮಾಡಲು ಸರ್ಕಾರವು ಯೋಚಿಸಿದೆಯೇ ಹಾಗಿದ್ದಲ್ಲಿ, ಯಾವ ಆಧಾರ ಮತ್ತು ನೀತಿಯನ್ನು ಅನುಸರಿಸಲಾಗುವುದು?

ಶ್ರೀ ಎಂ.ವೈ. ಘೋರ್ಪಡೆ (ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ಯ ಸಚಿವರು) :

ಅ) ತೀವ್ರ ಪರಿಶೀಲನೆಯಲ್ಲಿದೆ.

ಆ) ಅದೇ.

ಇ) ಅದೇ.

ಈ) ಅದೇ.

ಮಂಡಲ ಪಂಚಾಯತ್ ಕಾರ್ಯದರ್ಶಿಗಳ ನೇಮಕಾತಿ

806 - ಶ್ರೀ ಕರಿಯಣ್ಣ (ಹೊಳಿಹೊನ್ನೂರು) : ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್‌ರಾಜ್ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ರಾಜ್ಯದಲ್ಲಿರುವ ಮಂಡಲ ಪಂಚಾಯತ್ ಕಾರ್ಯಾಲಯಗಳೆಷ್ಟು?

ಆ) ಇವುಗಳಿಗೆಲ್ಲಾ ಕಾರ್ಯದರ್ಶಿಗಳನ್ನು ನೇಮಕ ಮಾಡಲಾಗಿದೆಯೆ?

ಇ) ಇಲ್ಲದಿದ್ದಲ್ಲಿ ಕೊರತೆಯಿರುವ ಕಾರ್ಯದರ್ಶಿಗಳೆಷ್ಟು ಹಾಗೂ ಅವುಗಳನ್ನು ನೇಕಮ ಮಾಡಲು ಸರ್ಕಾರ ಕ್ರಮ ಕೈಗೊಳ್ಳುವುದೇ?

ಶ್ರೀ ಎಂ.ವೈ. ಘೋರ್ಪಡೆ (ಗ್ರಾಮೀಣ ಅಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು) :

ಅ) 2534.

ಆ) ಬಹುತೇಕ ಮಂಡಲ ಪಂಚಾಯತಿಗಳಿಗೆ ಕಾರ್ಯದರರ್ಶಿಗಳನ್ನು ನೇಮಕಮಾಡಲಾಗಿದೆ.

ಇ) 103 ಮಂಡಲ ಪಂಚಾಯತ್ ಕಾರ್ಯದರ್ಶಿಗಳ ಹುದ್ದೆಗಳು ಖಾಲಿ ಇದ್ದು ಅವುಗಳನ್ನು ತುಂಬುವ ಬಗ್ಗೆ ಸರ್ಕಾರ ಕ್ರಮ ಕೈಗೊಳ್ಳಲಿದೆ.